# ಕರ್ನಾಟಕ ಸರ್ಕಾರ

ಸಂಖ್ಯೆ: ಗ್ರಾಅಪ/266/ಗ್ರಾಪಂಅ/2015 (ಭಾ)

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ:10-03-2016

15

ಇವರಿಂದ:

ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಪಂ.ರಾಜ್)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ,
ಬಹುಮಹಡಿ ಕಟ್ಟಡ,
ಬೆಂಗಳೂರು.

ಇವರಿಗೆ:

ಮುಖ್ಯ ಕಾರ್ಯನಿರ್ವಾಹಣಾಧಿಕಾರಿಗಳು,
ಜಿಲ್ಲಾ ಪಂಚಾಯತಿ,
ಉತ್ತರ ಕನ್ನಡ, ದಕ್ಷಿಣ ಕನ್ನಡ, ಉಡುಪಿ,
ಶಿವಮೊಗ್ಗ, ಚಿಕ್ಕಮಗಳೂರು ಮತ್ತು ಕೊಡಗು.

ಮಾನ್ಯರೆ,

**ವಿಷಯ:** ಉತ್ತರ ಕನ್ನಡ, ದಕ್ಷಿಣ ಕನ್ನಡ, ಉಡುಪಿ, ಶಿವಮೊಗ್ಗ ಚಿಕ್ಕಮಗಳೂರು ಮತ್ತು ಕೊಡಗು ಜಿಲ್ಲೆಗಳಿಗೆ ಇ-ಸ್ವತ್ತು ತಂತ್ರಾಂಶದಿಂದ ವಿನಾಯಿತಿ ನೀಡುವ ಬಗ್ಗೆ.

**ಉಲ್ಲೇಖ:**
1. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 266 ಗ್ರಾಪಂಅ 2015 (ಭಾ) ದಿನಾಂಕ: 13-01-2016.
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಉಡುಪಿ ರವರ ಪತ್ರ ಸಂಖ್ಯೆ:ಉಜಿಪಂ:ಅಭಿವೃದ್ಧಿ:ಸಿಆರ್: 2015-16 ದಿನಾಂಕ:01-02-2016.

***

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಕರ್ನಾಟಕ ಪಂಚಾಯತ್ ರಾಜ್ (ಗ್ರಾಮ ಪಂಚಾಯತಿಗಳ ಆಯವ್ಯಯ ಮತ್ತು ಲೆಕ್ಕ ಪತ್ರಗಳು) ನಿಯಮಗಳು, 2006 ರ ನಿಯಮ 30 ರಿಂದ ಉತ್ತರ ಕನ್ನಡ, ದಕ್ಷಿಣ ಕನ್ನಡ, ಉಡುಪಿ, ಶಿವಮೊಗ್ಗ ಚಿಕ್ಕಮಗಳೂರು ಮತ್ತು ಕೊಡಗು ಜಿಲ್ಲೆಗಳಿಗೆ ಇ-ಸ್ವತ್ತು ತಂತ್ರಾಂಶದಿಂದ ತಾತ್ಕಾಲಿಕವಾಗಿ ಮತ್ತು ಮುಂದಿನ ಆದೇಶದವರೆಗೆ ವಿನಾಯಿತಿ ನೀಡಿ ಆದೇಶಿಸಲಾಗಿತ್ತು.

ಉಲ್ಲೇಖ (2) ರ ಪತ್ರದಲ್ಲಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಉಡುಪಿ ರವರು ಉಲ್ಲೇಖ (1)ರ ಆದೇಶದಲ್ಲಿನ ವಿನಾಯಿತಿಯು ಕ್ರಮಬದ್ಧವಲ್ಲದ ಆಸ್ತಿಗಳಿಗೆ ನೀಡಲಾಗುವ ನಮೂನೆ 11ಬಿ ದಾಖಲೆಗೆ ಮಾತ್ರ ಅನ್ವಯಿಸುತ್ತದೆಯೇ ಅಥವಾ ಅಂತಿಮ ಆದೇಶದಲ್ಲಿ ಕಾಣಿಸಿದಂತೆ ಇ-ಸ್ವತ್ತುವಿಗೆ ಸಂಪೂರ್ಣ ವಿನಾಯಿತಿ ಇದೆಯೇ ಹಾಗೂ ಕ್ರಮವಲ್ಲದ ಆಸ್ತಿಗಳ ನೊಂದಣಿಗೆ ದಾಖಲಾತಿ ಕೋರಿ ಗ್ರಾಮ ಪಂಚಾಯತಿಗೆ ಸಲ್ಲಿಕೆಯಾಗುವ ಅರ್ಜಿಗಳಿಗೆ ಯಾವ ನಮೂನೆಯಲ್ಲಿ ದಾಖಲೆ ನೀಡಬೇಕು ಹಾಗೂ ನೀಡಲು ಅನುಸರಿಸಬೇಕಾದ ಕ್ರಮಗಳ ಬಗ್ಗೆ ಮಾರ್ಗದರ್ಶನ ನೀಡಲು ಕೋರಿರುತ್ತಾರೆ.

ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿನ ಕ್ರಮಬದ್ಧ ಆಸ್ತಿಗಳಿಗೆ ನಮೂನೆ-9 ಮತ್ತು 11ಎ ನ್ನು ಇ-ಸ್ವತ್ತು ತಂತ್ರಾಂಶದ ಮೂಲಕ ಪಂಚಾಯತಿ ಅಭಿವೃದ್ಧಿ ಅಧಿಕಾರಿಯ ಡಿಜಿಟಲ್ ಸಹಿಯ ಮೂಲಕ ವಿತರಿಸಬೇಕಾಗುತ್ತದೆ. ಕ್ರಮಬದ್ಧವಲ್ಲದ ಆಸ್ತಿಗಳಿಗೆ ನಮೂನೆ-11ಬಿ ಯನ್ನು ಕರ್ನಾಟಕ ಪಂಚಾಯತ್ ರಾಜ್ (ಗ್ರಾಮ ಪಂಚಾಯತಿಗಳ ಆಯ-ವ್ಯಯ ಮತ್ತು ಲೆಕ್ಕಪತ್ರಗಳು) (2ನೇ ತಿದ್ದುಪಡಿ) ನಿಯಮಗಳು 2013 ರನ್ವಯ ನಿಯಮ, 30 ರಡಿ ನಿಗದಿಪಡಿಸಿರುವ ನಮೂನೆಯಲ್ಲಿಯೇ ಪಂಚಾಯತಿ ಅಭಿವೃದ್ಧಿ ಅಧಿಕಾರಿಯು ತಾತ್ಕಾಲಿಕವಾಗಿ ಮುಂದಿನ ಆದೇಶದವರೆಗೆ ಕೈಬರಹದಲ್ಲಿ ನೀಡಲು ಹಾಗೂ ನಮೂನೆ 11ಬಿ ಪಡೆಯಲು ಸಾರ್ವಜನಿಕರು 1) ಲಭ್ಯವಿದ್ದರೆ ಪರಿವರ್ತಿತ ಆದೇಶದ ಪ್ರತಿ 2) ಪಹಣಿ ಪತ್ರಿಕೆ, 3) ಫಾರಂ ಬಿಲ್ಡಿಂಗ್‌ಗಳನ್ನು ಗುರುತಿಸಲು ಸಂಬಂಧಿಸಿದ ತಹಶೀಲ್ದಾರ್ / ಕಂದಾಯ ಪರೀವೀಕ್ಷರ ಪ್ರಮಾಣ ಪತ್ರ 4) ಕರ್ನಾಟಕ ಭೂ ಕಂದಾಯ ಅಧಿನಿಯಮ, 1964ರ ಪ್ರಕರಣ 95(2) ರನ್ವಯ ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳ ಆಸ್ತಿಗಳಿಗೆ ಸಂಬಂಧಿಸಿದಂತೆ ತಹಶೀಲ್ದಾರ್‌ರವರು ನೀಡಿರುವ ಹಿಂಬರಹದ ಪ್ರತಿಯೊಂದಿಗೆ ಯಾವುದಾದರೂ ಒಂದು ದಾಖಲೆಯನ್ನು ನೀಡಬೇಕಾಗುತ್ತದೆ ಎಂದು ತಮಗೆ ತಿಳಿಸಲು ನಾನು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ವಿಶ್ವಾಸಿ,

(ಟ.ವಿ. ಅರುಣ್ ಕುಮಾರ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಪ್ರತಿ:

1. ಸರ್ಕಾರದ ಪ್ರಧಾನ ಕಾರ್ಯದರ್ಶಿ (ವಿಪತ್ತು ನಿರ್ವಹಣೆ, ನೋಂದಣಿ ಮತ್ತು ಮುದ್ರಾಂಕ) ಕಂದಾಯ ಇಲಾಖೆ, ಬೆಂಗಳೂರು.
2. ನೋಂದಣಿ ಮಹಾಪರಿವೀಕ್ಷಕರು ಮತ್ತು ಮುದ್ರಾಂಕಗಳ ಆಯುಕ್ತರು, ಕಂದಾಯ ಭವನ, 8ನೇ ಮಹಡಿ, ಕೆ.ಜಿ.ರಸ್ತೆ, ಬೆಂಗಳೂರು-560 009.
3. ಉತ್ತರ ಕನ್ನಡ, ದಕ್ಷಿಣ ಕನ್ನಡ, ಉಡುಪಿ, ಶಿವಮೊಗ್ಗ, ಚಿಕ್ಕಮಗಳೂರು ಮತ್ತು ಕೊಡಗು ಜಿಲ್ಲೆಗಳ ತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು.
4. ಉತ್ತರ ಕನ್ನಡ, ದಕ್ಷಿಣ ಕನ್ನಡ, ಉಡುಪಿ, ಶಿವಮೊಗ್ಗ, ಚಿಕ್ಕಮಗಳೂರು ಮತ್ತು ಕೊಡಗು ಜಿಲ್ಲೆಗಳ ಗ್ರಾಮ ಪಂಚಾಯತಿಗಳ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು.